**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:15-10-2020.

# ಆದೇಶ

1. ರಾಜ್ಯದಲ್ಲಿ ಕೋವಿಡ್-19 ಪ್ರಕರಣಗಳು ಉಲ್ಬಣಗೊಳ್ಳುತ್ತಿರುವುದರಿಂದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸುತ್ತೋಲೆ ಸಂಖ್ಯೆ: HFW 225 ACS 2020, ದಿನಾಂಕ:15.07.2020ರಲ್ಲಿ ಸರ್ಕಾರ ನಿಗದಿಪಡಿಸಿರುವ ದರದಂತೆ ರೋಗಿಗಳಿಗೆ ಶೇಕಡ 50ರಷ್ಟು ಹಾಸಿಗೆಗಳನ್ನು ಮೀಸಲಿಡುವಂತೆ ಖಾಸಗಿ ವೈದ್ಯಕೀಯ ಸಂಸ್ಥೆಗಳಿಗೆ ಆದೇಶಿಸಲಾಗಿರುತ್ತದೆ. ಆದಾಗ್ಯೂ, ಕೆಲವು ಖಾಸಗಿ ವೈದ್ಯಕೀಯ ಸಂಸ್ಥೆಗಳಲ್ಲಿ ದಾಖಲಿಸಲು ಶಿಫಾರಸ್ಸು ಮಾಡಲ್ಪಟ್ಟ ರೋಗಿಗಳನ್ನು ಮತ್ತು ಅನಾರೋಗ್ಯದ ಕಾರಣಗಳಿಂದಾಗಿ ತೊಂದರೆ ಅನುಭವಿಸಿ ಕೋವಿಡ್-19 ರೋಗಲಕ್ಷಣಗಳನ್ನು ಹೊಂದಿದ್ದು ಸ್ವಯಂ ವರದಿ ಮಾಡುವ ರೋಗಿಗಳನ್ನು ಆಸ್ಪತ್ರೆಗಳಲ್ಲಿ ಒಂದಲ್ಲಾ ಒಂದು ಕಾರಣ ನೀಡಿ ಸೇರಿಸಿಕೊಳ್ಳಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

2. ಈ ಹಿನ್ನೆಲೆಯಲ್ಲಿ, ಖಾಸಗಿ ವೈದ್ಯಕೀಯ ಸಂಸ್ಥೆಗಳು ಹಾಸಿಗೆಗಳನ್ನು ಮೀಸಲಿರಿಸುವ ಕುರಿತು ಸರ್ಕಾರಿ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ನಿಗಾವಹಿಸುವ ಸಲುವಾಗಿ ಮತ್ತು ಅಧಿಕೃತ ವ್ಯಕ್ತಿಗಳು ಉಲ್ಲೇಖಿಸುವ ಕೋವಿಡ್-19 ಬಾಧಿತ ರೋಗಿಗಳನ್ನು ಸೇರಿಸಿಕೊಳ್ಳುವ ಉದ್ದೇಶಕ್ಕಾಗಿ ಆಸ್ಪತ್ರೆಯ ಹಾಸಿಗೆಗಳು ಲಭ್ಯವಾಗುವಂತೆ ಮಾಡುವ ಸಲುವಾಗಿ ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:19.07.2020 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮತ್ತು ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:12.10.2020 ರಲ್ಲಿ ಮೈಸೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಕೋವಿಡ್-19 ಗೆ ಗುರುತಿಸಲ್ಪಟ್ಟಿರುವ ಆಸ್ಪತ್ರೆಗಳಿಗೆ ನೋಡಲ್ ಅಧಿಕಾರಿಗಳ ತಂಡವನ್ನು ರಚಿಸಲಾಗಿರುತ್ತದೆ.

3. ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಸೆಕ್ಷನ್ 69ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾದ ಈ ಕೆಳಗೆ ಸಹಿ ಮಾಡಿರುವ ನಾನು ಈ ನೋಡಲ್ ಅಧಿಕಾರಿಗಳಿಗೆ ವಹಿಸಲಾದ ಕಾರ್ಯಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ, ಈ ಅಧಿಕಾರಿಗಳಿಗೆ ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಸೆಕ್ಷನ್ 22ರ ಸಬ್ ಸೆಕ್ಷನ್ (2), ಖಂಡ(ಹೆಚ್) ಅಡಿಯಲ್ಲಿ ಅದರ ಪ್ರಕಾರ್ಯಗಳನ್ನು ಮತ್ತು ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಸೆಕ್ಷನ್ 24ರ ಖಂಡ (ಎಫ್), (ಹೆಚ್), (ಜೆ) ಮತ್ತು (ಎಲ್) ಅಡಿಯಲ್ಲಿ ಅಧಿಕಾರಗಳು ಮತ್ತು ಪ್ರಕಾರ್ಯಗಳನ್ನು ಪ್ರತ್ಯಾಯೋಜಿಸಿರುತ್ತೇನೆ ಹಾಗೂ ಈ ಕೆಳಕಂಡ ಅಧಿಕಾರ ಮತ್ತು ಕರ್ತವ್ಯಗಳನ್ನು ಚಲಾಯಿಸಲು ಆದೇಶಿಸಿರುತ್ತೇನೆ.

**ನೋಡಲ್ ಅಧಿಕಾರಿಗಳ ಕರ್ತವ್ಯಗಳು:**

(i) ಖಾಸಗಿ ಆಸ್ಪತ್ರೆಗಳು ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳು ಶೇಕಡಾ 50 ರಷ್ಟು ಹಾಸಿಗೆಗಳನ್ನು ಮೀಸಲಿಟ್ಟಿರುವ ಬಗ್ಗೆ ಖಚಿತ ಪಡಿಸಿಕೊಳ್ಳುವುದು.

(ii) ಕೇಂದ್ರೀಕೃತ ಹಾಸಿಗೆ ಹಂಚಿಕೆ ಮಾಡುವ ತಂಡದೊಂದಿಗೆ ಸಮನ್ವಯ ಸಾಧಿಸಿ ಬಿಬಿಎಂಪಿ ವಲಯವಾರು/ಮೈಸೂರು ನಗರದಲ್ಲಿ ಕೋವಿಡ್ ಸೋಂಕಿತರಿಗೆ ಚಿಕಿತ್ಸೆಗಾಗಿ ಹಾಸಿಗೆ ಹಂಚಿಕೆ ಮಾಡಲು ಕ್ರಮ ವಹಿಸುವುದು.

(iii) ಖಾಸಗಿ ಆಸ್ಪತ್ರೆಗಳು ಚಿಕಿತ್ಸೆಗಾಗಿ ಬರುವ ಯಾವುದೇ ರೋಗಿಗಳಿಗೆ ಚಿಕಿತ್ಸೆಯನ್ನು ನಿರಾಕರಿಸುವಂತಿಲ್ಲ.

(iv) ತಮ್ಮಲ್ಲಿ ಚಿಕಿತ್ಸೆಗಾಗಿ ಅಗತ್ಯ ಸೌಲಭ್ಯ ಇಲ್ಲದಿದ್ದಲ್ಲಿ ಚಿಕಿತ್ಸೆಗೆ ಅಗತ್ಯವುಳ್ಳ ಸೌಲಭ್ಯ ಹೊಂದಿದ ಆಸ್ಪತ್ರೆಗೆ ಶಿಫಾರಸ್ಸು ಮಾಡುವುದನ್ನು ಖಚಿತಪಡಿಸಿಕೊಳ್ಳುವುದು.

(v) ಕೋವಿಡ್-19 ಪ್ರಕರಣಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಂಶಗಳನ್ನು ಪರಿಶೀಲಿಸುವುದು.

ಎ) 108 ಅಂಬುಲೆನ್ಸ್ ಸೇವೆಗಳ ದಕ್ಷತೆಯ ಬಗ್ಗೆ ಮೇಲ್ವಿಚಾರಣೆ ಮಾಡುವುದು ಮತ್ತು ಖಚಿತಪಡಿಸಿಕೊಳ್ಳುವುದು.

ಬಿ) ಖಾಸಗಿ ಆಸ್ಪತ್ರೆಗಳು ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿನ ಸೇವೆಗಳ ಗುಣಮಟ್ಟವನ್ನು ಮೇಲ್ವಿಚಾರಣೆ ಮಾಡುವುದು ಮತ್ತು ಖಚಿತಪಡಿಸಿಕೊಳ್ಳುವುದು.

(vi) ಖಾಸಗಿ ಆಸ್ಪತ್ರೆಗಳು ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳು ಕೋವಿಡ್-19 ರ ಚಿಕಿತ್ಸೆಗೆ ಸರ್ಕಾರವು ನಿಗದಿಪಡಿಸಿದ ಶುಲ್ಕಕ್ಕಿಂತ ಹೆಚ್ಚಿನ ಶುಲ್ಕ ವಿಧಿಸದಂತೆ ನೋಡಿಕೊಳ್ಳುವುದು.

(vii) ಹೆಚ್ಚಿನ ಶುಲ್ಕ ವಿಧಿಸಿದ ಪ್ರಕರಣಗಳಲ್ಲಿ ಹೆಚ್ಚಿಗೆ ಪಡೆದ ಹಣ ಮರುಪಾವತಿಸುವುದರೊಂದಿಗೆ ತಪ್ಪಿತಸ್ಥರ ವಿರುದ್ಧ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳುವುದು.

(viii) ಕೆಪಿಎಂಇ ಅಧಿನಿಯಮ ಮತ್ತು ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಕೋವಿಡ್-19 ಸಂಬಂಧಿತ ಎಲ್ಲಾ ಅಧಿನಿಯಮಗಳು, ನಿಯಮಗಳು, ಎಸ್.ಒ.ಪಿ ಗಳು ಮತ್ತು ಸುತ್ತೋಲೆಗಳಲ್ಲಿನ ನಿಬಂಧನೆಗಳನ್ನು ಖಾಸಗಿ ಆಸ್ಪತ್ರೆಗಳು ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳು ಪಾಲಿಸುತ್ತಿವೆಯೇ ಎಂಬ ಬಗ್ಗೆ ಪರಿಶೀಲನೆ ಹಾಗೂ ಮೇಲ್ವಿಚಾರಣೆ ನಡೆಸಲು, ನಿರ್ದೇಶನ ಮತ್ತು ಶಿಫಾರಸ್ಸು ನೀಡಲು ಹಾಗೂ ಅಧಿನಿಯಮದ ನಿಬಂಧನೆಗಳ ಅಡಿಯಲ್ಲಿ ದಂಡ ವಿಧಿಸಲು ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

**<u>ನೋಡಲ್ ಅಧಿಕಾರಿಗಳ ಅಧಿಕಾರಗಳು:</u>**

(i) ಸಂಬಂಧಿಸಿದ ಅಧಿನಿಯಮದ ಅಡಿಯಲ್ಲಿ ಪ್ರದತ್ತವಾಗಿರುವ ಅಧಿಕಾರದನ್ವಯ ನೋಡಲ್ ಅಧಿಕಾರಿಗಳು ದಾಖಲೆಗಳನ್ನು ತರಿಸಿಕೊಂಡು ಪರಿಶೀಲಿಸಬಹುದು, ಮೇಲ್ವಿಚಾರಣೆ ಮಾಡಬಹುದು, ನಿರ್ದೇಶನಗಳನ್ನು ನೀಡಬಹುದು ಹಾಗೂ ದಂಡಗಳನ್ನು ವಿಧಿಸಬಹುದು.

(ii) ನೋಡಲ್ ಅಧಿಕಾರಿಗಳು ತಮ್ಮ ಕರ್ತವ್ಯಗಳನ್ನು ನಿರ್ವಹಿಸಲು ಕೋವಿಡ್-19 ಚಿಕಿತ್ಸೆ ಹಾಗೂ ನಿರ್ವಹಣೆಗಾಗಿ ಸ್ಥಾಪಿತವಾಗಿರುವ ಎಲ್ಲಾ ವಲಯ ಕಚೇರಿಗಳು ಮತ್ತು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಅಧಿಕಾರಿಗಳ ಸೇವೆಯನ್ನು ಬಳಸಿಕೊಳ್ಳುವುದು.

(iii) ನೋಡಲ್ ಅಧಿಕಾರಿಗಳು ತಮ್ಮ ಕರ್ತವ್ಯಗಳ ಪರಿಣಾಮಕಾರಿ ನಿರ್ವಹಣೆಗಾಗಿ ಸಹಕರಿಸಲು ಅವಶ್ಯ ಅಧಿಕಾರಿಗಳನ್ನು ಕರ್ತವ್ಯಕ್ಕೆ ನಿಯೋಜಿಸಿಕೊಳ್ಳುವ ಅಧಿಕಾರ ಹೊಂದಿರುತ್ತಾರೆ.

ಟಿಎಂವಿಜಯಭಾಸ್ಕರ 15/10/2020
**(ಟಿ.ಎಂ. ವಿಜಯ್ ಭಾಸ್ಕರ್)**
ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ
ಕಾರ್ಯಕಾರಿ ಸಮಿತಿ ಅಧ್ಯಕ್ಷರು

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು